# ಬೆಂಗಳೂರು ವಿಶ್ವವಿದ್ಯಾಲಯ

ಸಂಖ್ಯೆ: ಎಸಿಎ-3/ಎ3/ಶಾ.ಸಂ./SKVCPE/2014-2015

ಜ್ಞಾನಭಾರತಿ
ಬೆಂಗಳೂರು-56
ದಿನಾಂಕ:03-07-2014

## ಅಧಿಸೂಚನೆ

**ವಿಷಯ: 2014-2015ನೇ ಶೈಕ್ಷಣಿಕ ಸಾಲಿನಿಂದ ಚಿಕ್ಕಬಳ್ಳಾಪುರದ ಶ್ರೀ ಕೆ. ವೆಂಕಟಪತಪ್ಪ ದೈಹಿಕ ಶಿಕ್ಷಣ ಕಾಲೇಜಿಗೆ** ಶಾಶ್ವತ ಸಂಯೋಜನೆಯನ್ನು ನೀಡುವ ಬಗೆಗೆ.

**ಉಲ್ಲೇಖ:** ಸರ್ಕಾರದ ಪತ್ರದ ಸಂಖ್ಯೆ ಇಡಿ:113:ಯು.ಬಿ.ವಿ.:2014 ದಿ:24-06-2014.

* * *

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 62ನೇ ಪ್ರಕರಣದ (1)ನೇ ಉಪ ಪ್ರಕರಣದಡಿ ಪ್ರದತ್ತವಾದ ಅಧಿಕಾರದನ್ವಯ ಹಾಗೂ ವಿಶ್ವವಿದ್ಯಾಲಯ ಪರಿನಿಯಮದನ್ವಯ ಬೆಂಗಳೂರು ವಿಶ್ವವಿದ್ಯಾಲಯವು ಚಿಕ್ಕಬಳ್ಳಾಪುರದ **ಶ್ರೀ ಕೆ. ವೆಂಕಟಪತಪ್ಪ ದೈಹಿಕ ಶಿಕ್ಷಣ ಕಾಲೇಜಿನಲ್ಲಿ** ನಡೆಸುತ್ತಿರುವ ಈ ಕೆಳಗೆ ನಮೂದಿಸಿರುವ ಕೋರ್ಸಿನೊಂದಿಗೆ ಕೆಳಕಂಡ ಷರತ್ತಿಗೊಳಪಟ್ಟು, ಐದು ವರ್ಷಗಳ ಅವಧಿಯ ಶಾಶ್ವತ ಸಂಯೋಜನಾ ಮಂಜೂರಾತಿಯನ್ನು **2014-2015**ನೇ ಶೈಕ್ಷಣಿಕ ಸಾಲಿನಿಂದ **2018-19**ನೇ ಸಾಲಿನವರೆಗೆ ಜಾರಿಗೆ ಬರುವಂತೆ ನೀಡಿದೆ.

| ಕೋರ್ಸು | ವಿಷಯ | ವಿದ್ಯಾರ್ಥಿ ಪ್ರಮಾಣ |
|---|---|---|
| ಬಿ.ಪಿ.ಇಡಿ. | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 40 (ನಲವತ್ತು) |

ಷರತ್ತುಗಳು:

1. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಮೇಲ್ಕಂಡ ಕೋರ್ಸುಗಳಿಗೆ ಸರ್ಕಾರವು ಯಾವುದೇ ಕಾಲಕ್ಕೆ ಅನುದಾನವನ್ನು ಮಂಜೂರುಮಾಡುವುದಿಲ್ಲ. ಅವು ಶಾಶ್ವತ ಅನುದಾನ ರಹಿತ ಕೋರ್ಸುಗಳೆಂದು ಪರಿಗಣಿಸತಕ್ಕದ್ದು.
2. ಸ್ಥಳೀಯ ಪರಿಶೀಲನಾ ಸಮಿತಿಯು ವಿಧಿಸಿರುವ ಪ್ರತಿಯೊಂದು ಷರತ್ತುಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
3. ವಿಶ್ವವಿದ್ಯಾಲಯದ ಅನುಶಾಸನ ಪರಿನಿಯಮಾವಳಿ ಮತ್ತು ಅಧ್ಯಾದೇಶಗಳನ್ನು ಕಾಲೇಜು ತಪ್ಪದೇ ಪಾಲಿಸತಕ್ಕದ್ದು.
4. ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ/ ಜಾರಿಯಲ್ಲಿರುವ ನಿಯಮಾವಳಿ ಮತ್ತು ಆದೇಶಗಳನ್ನು ಪಾಲಿಸತಕ್ಕದ್ದು.
5. 2014-15ನೇ ಸಾಲಿನಿಂದ ನೀಡಿರುವ ಶಾಶ್ವತ ಸಂಯೋಜನೆಯು ತಪಾಸಣೆಗೆ ಹಾಗೂ ನಿಯತಕಾಲಿಕ ಪರಿಶೀಲನೆಗೆ ಒಳಪಟ್ಟಿರುತ್ತದೆ.
6. ಶಾಶ್ವತ ಸಂಯೋಜನೆಯು ಮಂಜೂರಾತಿಗೆ ಒಳಪಟ್ಟ ಕೋರ್ಸುಗಳಿಗೆ:ವಿಷಯ ಸಮೂಹಗಳಿಗೆ: ಭಾಷೆಗಳಿಗೆ ಮಾತ್ರ ಅನ್ವಯವಾಗುತ್ತದೆ.
7. ಶಾಶ್ವತ ಸಂಯೋಜನೆಗೆ ಒಳಪಡದ ಕೋರ್ಸುಗಳಿಗೆ : ವಿಷಯ ಸಮೂಹಗಳಿಗೆ: ಭಾಷೆಗಳಿಗೆ ಕಾಲೇಜು ಸಂಯೋಜನಾ ನವೀಕರಣಕ್ಕೆ ವಿಶ್ವವಿದ್ಯಾಲಯದಿಂದ ಮಂಜೂರಾತಿ ಪಡೆಯತಕ್ಕದ್ದು.
8. ಶಾಶ್ವತ ಸಂಯೋಜನೆಯ ಅವಧಿ ಮುಗಿದ ಮೇಲೆ, ಮತ್ತೆ ಈ ಶಾಶ್ವತ ಸಂಯೋಜನಾ ನವೀಕರಣದ ಪರಿಶೀಲನೆಗೆ ಬೆಂಗಳೂರು ವಿಶ್ವವಿದ್ಯಾಲಯಕ್ಕೆ ಅರ್ಜಿ ಸಲ್ಲಿಸತಕ್ಕದ್ದು.
9. ವಿಶ್ವವಿದ್ಯಾಲಯದಿಂದ ಈ ಮೊದಲು ಸದರಿ ಕೋರ್ಸುಗಳಿಗೆ ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣವು ಯಾವುದೇ ಕಾಲಕ್ಕೂ ಹೆಚ್ಚುವರಿ ಆಗತಕ್ಕದ್ದಲ್ಲ.
10. ***ಕಾಲೇಜು ಎನ್.ಸಿ.ಟಿ.ಇ. ಅಧಿನಿಯಮ 1993ರ 14ನೇ ಪ್ರಕರಣದಡಿ ಮಾನ್ಯತೆಯನ್ನು ಹೊಂದಿರತಕ್ಕದ್ದು.***
11. ಕಾಲೇಜು/ಆಡಳಿತ ಮಂಡಳಿ ಶೇ.50ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗಧಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗಧಿಪಡಿಸುವ ಶುಲ್ಕವನ್ನು ಮಾತ್ರ ವಸೂಲುಮಾಡತಕ್ಕದ್ದು. ವಿಶ್ವವಿದ್ಯಾಲಯವು ನಿಗಧಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.

. . .2 . . . .